# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ, ಬೆಂಗಳೂರು

---

ಸಂ: ಸ.ಅ/ವಾ-161/2022-23 ದಿನಾಂಕ : 05/11/2022

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :05-11-2022 ರಂದು ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :05-11-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 11.30 ಗಂಟೆಗೆ ಶ್ರೀ ಧರಣೇಂದ್ರಕುಮಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ಕೀರ್ತಿ.ಹೆಚ್.ಆರ್ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಹೊಸಕೆರೆಹಳ್ಳಿ ವಾರ್ಡ್‌ನಲ್ಲಿ ರೆಫರ್ ಆಸ್ಪತ್ರೆ ಬಳಿ ಇರುವ ಉಧ್ಯಾನವನ ಪಾದಚಾರಿ ಮಾರ್ಗ ಹಾಳಾಗಿದ್ದು, ಅದನ್ನು ಸರಿಪಡಿಸುವಂತೆ ಸಾರ್ವಜನಿಕರು ಕೋರಿದಾಗ ಸಭೆಯಲ್ಲಿದ್ದ ತೋಟಗಾರಿಕಾ ಇಲಾಖೆ ಅಧಿಕಾರಿಗಳ ಗಮನಕ್ಕೆ ತರುವುದಾಗಿ ಮಾನ್ಯ ಅಧ್ಯಕ್ಷರು ಸಭೆಯ ಗಮನಕ್ಕೆ ತಂದರು.

2) ಹೊಸಕೆರೆಹಳ್ಳಿ ವಾರ್ಡ್‌ನಲ್ಲಿ ರೆಫರ್ ಆಸ್ಪತ್ರೆ ಬಳಿ ಸಿ.ಸಿ ಕ್ಯಾಮರಾ ಅಳವಡಿಸುವಂತೆ ಸಾರ್ವಜನಿಕರು ಕೋರಿದಾಗ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರುವುದಾಗಿ ಮಾನ್ಯ ಅಧ್ಯಕ್ಷರು ಸಭೆಯ ಗಮನಕ್ಕೆ ತಂದರು.

3) ಹೊಸಕೆರೆಹಳ್ಳಿ ಕೆರೆ ಅಜುಬಾಜು ಪ್ರದೇಶದಲ್ಲಿ ಸೊಳ್ಳೆಗಳು ಹೆಚ್ಚಾಗಿದ್ದು, ಅವುಗಳನ್ನು ನಿಯಂತ್ರಿಸುವಂತೆ ಸಾರ್ವಜನಿಕರು ಸಭೆಗೆ ಕೋರಿದಾಗ ಸಭೆಯಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರವರು ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

4) ವಾರ್ಡ್ ಸಂಖ್ಯೆ-161 ರ ಪ್ರದೇಶದಲ್ಲಿ ಕಾಂಕ್ರೀಟ್ ರಸ್ತೆಗಳಲ್ಲಿ ರಸ್ತೆಗುಂಡಿಗಳಾಗಿದ್ದು, ಅವುಗಳನ್ನು ಸರಿಪಡಿಸುವಂತೆ ಸಾರ್ವಜನಿಕರು ಕೋರಿದ್ದಾಗ ಸಭೆಯಲ್ಲಿದ್ದ ವಾರ್ಡ್ ಅಭಿಯಯಂತರರಿಗೆ ನೋಡೆಲ್ ಅಧಿಕಾರಿಯವರು ತಿಳಿಸಿರುತ್ತಾರೆ.

5) ವಾರ್ಡ್ ಸಂಖ್ಯೆ-161 ರ ಮಂಜುನಾಥನಗರದಲ್ಲಿ ಬಾಕಿ ಇರುವ 22 ಜನರಿಗೆ ಹಕ್ಕು ಪತ್ರಗಳನ್ನು ನೀಡುವಂತೆ ಸಾರ್ವಜನಿಕರು ಕೋರಿದಾಗ ಸಂಬಂಧಪಟ್ಟ ಸಹಾಯಕ ಕಂದಾಯ ಅಧಿಕಾರಿಗಳ ಗಮನಕ್ಕೆ ತರುವುದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ತಿಳಿಸಿದರು.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Keerthi H R.
ವಾರ್ಡ್ ಸಮಿತಿ ಸಂಚಾಲಕರು

T.S.m. 05/11/2022
ವಾರ್ಡ್ 161 ರ ನೋಡಲ್ ಅಧಿಕಾರಿ.